File No.AGRI-AMS/58/2019-AGRI_PLAN_B-AGRICULTURE Secretariat-Part(2)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕಿಸಾನ್ ಮಾನ್ ಧನ್ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಕುಂದುಕೊರತೆ ನಿವಾರಣಾ ಸಮಿತಿಗಳನ್ನು ರಚಿಸುವ ಕುರಿತು

ಓದಲಾಗಿದೆ: 1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: F.1-5/2019-FWS-II, ದಿನಾಂಕ: 05.07.2019 & 08.08.2019.

2. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಉಕೃನಿ(ರೈ&ತ) PM-KMY/152/2019-20,, ದಿನಾಂಕ: 29.08.2019.

*****

ಪ್ರಸ್ತಾವನೆ:

ರೈತರಿಗೆ ವೃದ್ಧಾಪ್ಯದಲ್ಲಿ ಜೀವನೋಪಾಯ ಮಾರ್ಗಗಳ ಕೊರತೆಯಾಗುವುದರಿಂದ, ಸಾಮಾಜಿಕ ಭದ್ರತೆಯನ್ನು ಕಲ್ಪಿಸುವುದು ಅವಶ್ಯಕವೆಂದು ಕಂಡುಬಂದಿದ್ದು, ಅದರಲ್ಲೂ, ಸಣ್ಣ ಮತ್ತು ಅತೀ ಸಣ್ಣ ರೈತರ ಉಳಿತಾಯವು ಹೆಚ್ಚಾಗಿರದೇ ಹೆಚ್ಚಿನ ಸಂಕಷ್ಟಗಳನ್ನು ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು "Pradhan Mantri Kisan Maandhan Yojana (PM-KMY)" ಯೋಜನೆಯನ್ನು ಜಾರಿಗೆ ತಂದಿರುತ್ತದೆ.

ಮೇಲೆ ಓದಲಾದ (1)ರ ಕೇಂದ್ರ ಸರ್ಕಾರದ ಪತ್ರಗಳಲ್ಲಿ "Pradhan Mantri Kisan Maandhan Yojana (PM-KMY)" ಯೋಜನೆಯನ್ನು ದೇಶದ ಎಲ್ಲಾ 18 ರಿಂದ 40 ವರ್ಷದೊಳಗಿನ ಸಣ್ಣ ಮತ್ತು ಅತಿ ಸಣ್ಣ ರೈತರಿಗಾಗಿ ದಿನಾಂಕ: 09.08.2019ರಂದು ಜಾರಿಗೆ ತರಲಾಗಿದ್ದು, ಈ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡ ಪುರುಷ ಮತ್ತು ಮಹಿಳಾ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅವರು ಅರವತ್ತು ವರ್ಷ ವಯಸ್ಸು ತುಂಬಿದ ನಂತರ ಮಾಸಿಕ ಕನಿಷ್ಠ ರೂ. 3000.00 ಗಳಂತೆ ವೃದ್ಧಾಪ್ಯ ಪಿಂಚಣಿಯನ್ನು ನೀಡಲಾಗುವುದು. ಈ ಯೋಜನೆಯು ಐಚ್ಛಿಕ ಹಾಗೂ ನಿಯತಕಾಲಿಕ ಅಂಶದಾಯಿ (ವಂತಿಕೆ ಆಧಾರಿತ) ಪಿಂಚಣಿ ಯೋಜನೆಯಾಗಿರುತ್ತದೆ. ಸದರಿ ಯೋಜನೆಯ ಮಾರ್ಗಸೂಚಿಯನ್ವಯ ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಕುಂದುಕೊರತೆ ನಿವಾರಣಾ ಸಮಿತಿಯನ್ನು ರಚಿಸಲು ಅವಕಾಶ ನೀಡಲಾಗಿದೆ.

ಮೇಲೆ ಓದಲಾದ (2)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ "Pradhan Mantri Kisan Maandhan Yojana (PM-KMY)" ಯೋಜನೆಯ ಮಾರ್ಗಸೂಚಿಯನ್ವಯ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಕುಂದುಕೊರತೆ ನಿವಾರಣಾ ಸಮಿತಿಗಳನ್ನು ಈ ಕೆಳಕಂಡಂತೆ ರಚಿಸಲು ಸೂಕ್ತ ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

**ಸಮಿತಿ: 1. ರಾಜ್ಯವಲಯ ಕುಂದುಕೊರತೆ ನಿವಾರಣಾ ಸಮಿತಿ:**

| ಕ್ರ.ಸಂ | ವಿವರ | ಹುದ್ದೆ |
|---|---|---|
| 1 | ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ, | ಅಧ್ಯಕ್ಷರು |
| 2 | ನಿರ್ದೇಶಕರು, EDCS, | ಸದಸ್ಯರು |
| 3 | ರಾಜ್ಯಸಂಯೋಜಕರು, ಸಾಮಾನ್ಯ ಸೇವಾ ಕೇಂದ್ರಗಳು (ಎಸ್.ಪಿ.ವಿ) | ಸದಸ್ಯರು |
| 4 | ಪ್ರಾದೇಶಿಕ ವ್ಯವಸ್ಥಾಪಕರು, ಭಾರತೀಯ ಜೀವ ವಿಮಾ ನಿಗಮ (LIC) | ಸದಸ್ಯರು |
| 5 | ಸಹಾಯಕ ಮುಖ್ಯ ವ್ಯವಸ್ಥಾಪಕರು IDBI | ಸದಸ್ಯರು |
| 6 | ಡೆಪ್ಯುಟಿ ಡೈರೆಕ್ಟರ್ ಜನರಲ್ & ಸ್ಟೇಟ್ ಇನ್ಫರ್ಮ್ಯಾಟಿಕ್ಸ್ ಅಧಿಕಾರಿ | ಸದಸ್ಯರು |
| 7 | ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿಯ ಪ್ರತಿನಿಧಿ | ಸದಸ್ಯರು |
| 8 | ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್ | ಸದಸ್ಯರು |
| 9 | ಆಯುಕ್ತರು, ಕೃಷಿ ಇಲಾಖೆ | ಸದಸ್ಯ ಕಾರ್ಯದರ್ಶಿಗಳು |

**ಸಮಿತಿ: 2.ಜಿಲ್ಲಾ ಮಟ್ಟದ ಕುಂದುಕೊರತೆ ನಿವಾರಣಾ ಸಮಿತಿ**

| ಕ್ರ.ಸಂ | ವಿವರ | ಹುದ್ದೆ |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಜಿಲ್ಲಾ ವ್ಯವಸ್ಥಾಪಕರು, ಸಾಮಾನ್ಯ ಸೇವಾ ಕೇಂದ್ರಗಳು (ಎಸ್.ಪಿ.ವಿ) | ಸದಸ್ಯರು |
| 3 | ಭಾರತೀಯ ಜೀವ ವಿಮಾ ನಿಗಮದ ಸಂಬಂಧಪಟ್ಟ ವಲಯದ ಕುಂದುಕೊರತೆ ನಿವಾರಣಾ ಅಧಿಕಾರಿಗಳು | ಸದಸ್ಯರು |
| 4 | ಲೀಡ್ ಬ್ಯಾಂಕ್ ಮ್ಯಾನೇಜರ್, | ಸದಸ್ಯರು |
| 5 | ಡಿಸ್ಟ್ರಿಕ್ಟ್ ಇನ್ಫರ್ಮ್ಯಾಟಿಕ್ಸ್ ಅಧಿಕಾರಿ, ಎನ್.ಐ.ಸಿ | ಸದಸ್ಯರು |
| 6 | ಸಂಬಂಧಪಟ್ಟ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು, | ಸದಸ್ಯ ಕಾರ್ಯದರ್ಶಿಗಳು |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 58 ಕೃಉಇ 2019 (ಭಾಗ-2), ಬೆಂಗಳೂರು, ದಿನಾಂಕ: 11.09.2019.**

ಕೇಂದ್ರ ಪುರಸ್ಕೃತ "Pradhan Mantri Kisan Maandhan Yojana (PM-KMY)" ಯೋಜನೆಯ ಮಾರ್ಗಸೂಚಿಯನ್ವಯ, ಸದರಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನೆ, ಮೇಲ್ವಿಚಾರಣೆ ಮತ್ತು ಅನುಷ್ಠಾನ ಸಮಯದಲ್ಲಿ ಎದುರಾಗುವ ಕುಂದುಕೊರತೆಗಳನ್ನು ನಿವಾರಿಸುವ ಸಲುವಾಗಿ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಕುಂದುಕೊರತೆ ನಿವಾರಣಾ ಸಮಿತಿಗಳನ್ನು ಈ ಕೆಳಕಂಡಂತೆ ಸಮಿತಿಗಳನ್ನು ರಚಿಸಲಾಗಿದೆ:

**ಸಮಿತಿ: 1. ರಾಜ್ಯವಲಯ ಕುಂದುಕೊರತೆ ನಿವಾರಣಾ ಸಮಿತಿ:**

| ಕ್ರ.ಸಂ. | ವಿವರ | ಹುದ್ದೆ |
|---|---|---|
| 1 | ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ, | ಅಧ್ಯಕ್ಷರು |
| 2 | ನಿರ್ದೇಶಕರು, EDCS, | ಸದಸ್ಯರು |
| 3 | ರಾಜ್ಯಸಂಯೋಜಕರು, ಸಾಮಾನ್ಯ ಸೇವಾ ಕೇಂದ್ರಗಳು (ಎಸ್.ಪಿ.ವಿ) | ಸದಸ್ಯರು |
| 4 | ಪ್ರಾದೇಶಿಕ ವ್ಯವಸ್ಥಾಪಕರು, ಭಾರತೀಯ ಜೀವ ವಿಮಾ ನಿಗಮ (LIC) | ಸದಸ್ಯರು |
| 5 | ಸಹಾಯಕ ಮುಖ್ಯ ವ್ಯವಸ್ಥಾಪಕರು IDBI | ಸದಸ್ಯರು |
| 6 | ಡೆಪ್ಯುಟಿ ಡೈರೆಕ್ಟರ್ ಜನರಲ್ & ಸ್ಟೇಟ್ ಇನ್ಫರ್ಮ್ಯಾಟಿಕ್ಸ್ ಅಧಿಕಾರಿ | ಸದಸ್ಯರು |
| 7 | ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿಯ ಪ್ರತಿನಿಧಿ | ಸದಸ್ಯರು |
| 8 | ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್ | ಸದಸ್ಯರು |
| 9 | ಆಯುಕ್ತರು, ಕೃಷಿ ಇಲಾಖೆ | ಸದಸ್ಯ ಕಾರ್ಯದರ್ಶಿಗಳು |

**ಸಮಿತಿ: 2.ಜಿಲ್ಲಾ ಮಟ್ಟದ ಕುಂದುಕೊರತೆ ನಿವಾರಣಾ ಸಮಿತಿ**

| ಕ್ರ.ಸಂ | ವಿವರ | ಹುದ್ದೆ |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಜಿಲ್ಲಾ ವ್ಯವಸ್ಥಾಪಕರು, ಸಾಮಾನ್ಯ ಸೇವಾ ಕೇಂದ್ರಗಳು (ಎಸ್.ಪಿ.ವಿ) | ಸದಸ್ಯರು |
| 3 | ಭಾರತೀಯ ಜೀವ ವಿಮಾ ನಿಗಮದ ಸಂಬಂಧಪಟ್ಟ ವಲಯದ ಕುಂದುಕೊರತೆ ನಿವಾರಣಾ ಅಧಿಕಾರಿಗಳು | ಸದಸ್ಯರು |
| 4 | ಲೀಡ್ ಬ್ಯಾಂಕ್ ಮ್ಯಾನೇಜರ್, | ಸದಸ್ಯರು |
| 5 | ಡಿಸ್ಟ್ರಿಕ್ಟ್ ಇನ್ಫರ್ಮ್ಯಾಟಿಕ್ಸ್ ಅಧಿಕಾರಿ, ಎನ್.ಐ.ಸಿ | ಸದಸ್ಯರು |
| 6 | ಸಂಬಂಧಪಟ್ಟ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು, | ಸದಸ್ಯ ಕಾರ್ಯದರ್ಶಿಗಳು |

ಮೇಲ್ಕಂಡ ಸಮಿತಿಗಳು ಯೋಜನೆಗೆ ಸಂಬಂಧಿಸಿದಂತೆ ಆಗ್ಗಿಂದಾಗ್ಗೆ ಕೇಂದ್ರ ಸರ್ಕಾರವು / ರಾಜ್ಯ ಸರ್ಕಾರವು ನೀಡುವ ಸೂಚನೆಗಳನ್ವಯ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

11/09/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
12. ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
13. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
14. ಆಯುಕ್ತರು, ರೇಷ್ಮೆ ಇಲಾಖೆ, ಬೆಂಗಳೂರು.
15. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
16. ನಿರ್ದೇಶಕರು, EDCS.
17. ಡೆಪ್ಯೂಟಿ ಡೈರೆಕ್ಟರ್ ಜನರಲ್ & ಸ್ಟೇಟ್ ಇನ್ಫರ್ಮ್ಯಾಟಿಕ್ಸ್ ಆಫೀಸರ್, ಬೆಂಗಳೂರು.
18. ರಾಜ್ಯಮಟ್ಟದ ಬ್ಯಾಂಕರ್ಸ್ ಸಮಿತಿ ಸದಸ್ಯರು, ಬೆಂಗಳೂರು.
19. ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್, ಬೆಂಗಳೂರು.
20. ಪ್ರಾದೇಶಿಕ ವ್ಯವಸ್ಥಾಪಕರು, ಭಾರತೀಯ ಜೀವ ವಿಮಾ ನಿಗಮ (LIC).
21. ಸಹಾಯಕ ಮುಖ್ಯ ವ್ಯವಸ್ಥಾಪಕರು, IDBI.
22. ಎಲ್ಲಾ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರು.
23. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
24. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
25. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
26. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
27. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
28. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
29. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರಮಸಂಖ್ಯೆ: 15 ರಿಂದ 22ರವರೆಗೆ: ಕೃಷಿ ಆಯುಕ್ತರ ಮುಖಾಂತರ)